ಕರ್ನಾಟಕ ವಿಧಾನ ಪರಿಷತ್ತು

ಚುಕ್ಕರಹಿತ ಪ್ರಶ್ನೆ ಸಂಖ್ಯೆ : **976(1188)**
ಸದಸ್ಯರ ಹೆಸರು : ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 16.03.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ.	ಮೈಸೂರು ಹಾಗೂ ಬೆಂಗಳೂರು ವಿಭಾಗದ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರ್ಹ ಸಹ ಶಿಕ್ಷಕರಿಗೆ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಲು ವಿಳಂಬ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ.
ಆ.	ವಿಳಂಬದಿಂದ ಅರ್ಹ ಸಹ ಶಿಕ್ಷಕರು ಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೆಂಗಳೂರು, ಮೈಸೂರು ವಿಭಾಗಗಳಲ್ಲಿ ಹಾಲಿ ಚಾಲ್ತಿಯಲ್ಲಿದ್ದ ಪ್ರೌಢ ಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯಲ್ಲಿ ಲೋಪದೋಷಗಳು ಕಂಡು ಬಂದಿವೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಪತ್ರ ಸಂಖ್ಯೆ: ಇಡಿ 152 ಎಲ್‌ಬಿಪಿ 2014, ದಿನಾಂಕ:20/05/2014ರಲ್ಲಿ ನೀಡಿರುವ ನಿರ್ದೇಶನಗಳಂತೆ, ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಹಾಗೂ ರೋಸ್ಟರ್ ಮೆರಿಟ್ ಆಧಾರದ ಮೇಲೆ, ಬೆಂಗಳೂರು ಮತ್ತು ಮೈಸೂರು ವಿಭಾಗವಾರು ಪ್ರತ್ಯೇಕವಾಗಿ ಅಂತಿಮಗೊಳಿಸಬೇಕಾಯಿತು. ಈ ಕಾರಣದಿಂದ ಮುಂಬಡ್ತಿ ಪ್ರಕ್ರಿಯೆ ವಿಳಂಬವಾಗಿರುತ್ತದೆ. ಬೆಂಗಳೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ದಿನಾಂಕ:06/02/2020ರಂದು ಪ್ರಕಟಿಸಲಾಗಿರುತ್ತದೆ. ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ 312 ಖಾಲಿ ಇರುವ ಹುದ್ದೆಗಳಿಗೆ ಬಡ್ತಿ ನೀಡುವ ಸಂಬಂಧ ದಿನಾಂಕ:10/03/2020ರಂದು ಇಲಾಖಾ ಮುಂಬಡ್ತಿ ಸಮಿತಿ ಸಭೆಯ ಅನುಮೋದನೆಯಾಗಿರುತ್ತದೆ. ಸದರಿ ಸಮಿತಿಯ ನಿರ್ಣಯದಂತೆ, ಶೀಘ್ರವಾಗಿ ಮುಖ್ಯ ಶಿಕ್ಷಕರ ಖಾಲಿ ಹುದ್ದೆಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು. ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅಂತಿಮವಾಗಿ ಆಕ್ಷೇಪಣೆಗಳು ಸ್ವೀಕೃತವಾಗಿರುವುದರಿಂದ, ಆಕ್ಷೇಪಣೆಗಳನ್ನು ಸರಿಪಡಿಸಿ, ಜ್ಯೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ, ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ 410 ಖಾಲಿಯಿರುವ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು.
ಇ.	ಮುಖ್ಯ ಶಿಕ್ಷಕರ ಹುದ್ದೆಯ ಬಡ್ತಿ ವಿಳಂಬಕ್ಕೆ ಕಾರಣಗಳೇನು; (ವಿವರ ನೀಡುವುದು).	
ಈ.	ಸದರಿ ಅರ್ಹ ಮುಖ್ಯ ಶಿಕ್ಷಕರಿಗೆ ಯಾವ ಕಾಲಮಿತಿಯಲ್ಲಿ ಬಡ್ತಿ ಸೌಲಭ್ಯ ನೀಡಲಾಗವುದು?	

ಸಂಖ್ಯೆ: ಇಡಿ 37 ಎಸ್‌ಓಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು